ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 22-03-2021 ಪ್ರಶ್ನೆ ಸಂಖ್ಯೆ : 1619 (1737)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎಸ್.ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 22-03-2021

ಉತ್ತರಿಸುವ ಸಚಿವರು : ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು

ವಿಷಯ : ಯಳಂದೂರು ಆಸ್ಪತ್ರೆಯಲ್ಲಿ ವೈದ್ಯರ ಕೊರತೆ ಬಗ್ಗೆ

(ಅ) ಯಳಂದೂರು ತಾಲ್ಲೂಕು ಆಸ್ಪತ್ರೆಗೆ ಮಂಜೂರಾಗಿರುವ ವೈದ್ಯರು /ತಜ್ಞ ವೈದ್ಯರು/ದಾದಿಯರು ಸೇರಿದಂತೆ ಅರೆ ವೈದ್ಯಕೀಯ ಸಿಬ್ಬಂದಿ/ಗ್ರೂಪ್-ಡಿ ನೌಕರರ ಸಂಖ್ಯೆ ಎಷ್ಟು; ಹಾಲಿ ಭರ್ತಿಯಾಗಿರುವ ಮತ್ತು ಖಾಲಿ ಇರುವ ಸದರಿ ಹುದ್ದೆಗಳ ಸಂಖ್ಯೆ ಎಷ್ಟು;

(ಆ) ವೈದ್ಯರ ಹುದ್ದೆಗಳನ್ನು ಭರ್ತಿಮಾಡುವಂತೆ ಸಾರ್ವಜನಿಕರು ಒತ್ತಾಯ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಕೂಡಲೇ ಖಾಲಿ ಇರುವ ವೈದ್ಯರು ಮತ್ತು ಅರೆ ವೈದ್ಯಕೀಯ ಸಿಬ್ಬಂದಿಗಳ ಹುದ್ದೆಗಳನ್ನು ಭರ್ತಿಮಾಡಿ ಸಾರ್ವಜನಿಕರಿಗೆ ಅನುಕೂಲ ಕಲ್ಪಿಸಿಕೊಡಲಾಗುವುದೇ ?